**Bangalore**
**Regional News**
**13.05.2025 / 2.30 PM**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಜೂನ್ ೩೦ ರೊಳಗೆ ಬಾಕಿ ಇರುವ ಕಂದಾಯ ಗ್ರಾಮಗಳ ರಚನೆಗೆ ಸಂಬಂಧಿಸಿದಂತೆ ಅಂತಿಮ ಅಧಿಸೂಚನೆ ಹೊರಡಿಸಲಾಗವುದು -ಕಂದಾಯ ಸಚಿವ ಕೃಷ್ಣಬೈರೇಗೌಡ
೨. ಮಾಜಿ ಅಬಕಾರಿ ಸಚಿವ ಕೆ. ಗೋಪಾಲಯ್ಯ ಒಳಗೊಂಡ ಪ್ರಕರಣದಲ್ಲಿ ಲೋಕಾಯುಕ್ತ ಪೊಲೀಸರು ಸಲ್ಲಿಸಿದ ಮುಕ್ತಾಯ ವರದಿಯನ್ನು ವಿಶೇಷ ನ್ಯಾಯಾಲಯವು ರದ್ದುಗೊಳಿಸಿದೆ.
೩. ಕದನವಿರಾಮ ಘೋಷಿಸಿದ್ದರೆ ಅದು ಶಾಶ್ವತ ಅಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಅವರೇ ಸ್ಪಷ್ಟಪಡಿಸಿದ್ದಾರೆ- ಬಿ.ವೈ.ವಿಜಯೇಂದ್ರ
೪. ಅರಣ್ಯ ಉಳಿದರಷ್ಟೇ ಮಾನವ ಉಳಿಯಲು ಸಾಧ್ಯ - ಈಶ್ವರ ಖಂಡ್ರೆ,

**<><*<><>*><>**

ಮುಂಬರುವ ಜೂನ್ ೩೦ ರೊಳಗಾಗಿ ಜಿಲ್ಲೆಯಲ್ಲಿ ಬಾಕಿ ಇರುವ ಕಂದಾಯ ಗ್ರಾಮಗಳ ರಚನೆಗೆ ಸಂಬಂಧಿಸಿದಂತೆ ಅಂತಿಮ ಅಧಿಸೂಚನೆ ಹೊರಡಿಸಬೇಕು ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ಹೇಳಿದರು.

ಚಿತ್ರದುರ್ಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಿನ್ನೆ ನಡೆದ ಜಿಲ್ಲೆಯ ಕಂದಾಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದ ಅವರು, ಕಳೆದ ಹಲವಾರು ವರ್ಷಗಳಿಂದ ನೆನೆಗುದಿಗೆ ಬಿದ್ದಿರುವ ಹಟ್ಟಿ, ತಾಂಡಾಗಳನ್ನು ಕಂದಾಯ ಗ್ರಾಮಗಳನ್ನಾಗಿ ಮಾಡುವ ಕಾರ್ಯ ತ್ವರಿತಗತಿಯಲ್ಲಿ ನಡೆಯಬೇಕು ಎಂದು ಸೂಚನೆ ನೀಡಿದರು.

ಭೂ ಸುರಕ್ಷಾ ಯೋಜನೆಯನ್ನು ಭೂ ಕಂದಾಯ ಇಲಾಖೆಯ ಎಲ್ಲಾ ದಾಖಲೆಗಳನ್ನು ಡಿಜಿಟಲೀಕರಣಗೊಳಿಸುವ ಉದ್ದೇಶದಿಂದ ಕೈಗೆತ್ತಿಕೊಳ್ಳಲಾಗಿದ್ದು, ಈ ಯೋಜನೆ ತ್ವರಿತಗತಿಯಲ್ಲಿ ಆಗಬೇಕು ಎಂದು ಕೃಷಿ ಸಚಿವ ಕೃಷ್ಣ ಬೈರೇಗೌಡ ಹೇಳಿದರು.

ಇದೇ ೨೦ರಂದು ವಿಜಯನಗರ ಜಿಲ್ಲೆಯ ಹೊಸಪೇಟೆಯಲ್ಲಿ ಸರ್ಕಾರಕ್ಕೆ ಎರಡು ವರ್ಷ ಪೂರ್ಣಗೊಂಡ ಹಿನ್ನಲೆಯಲ್ಲಿ ೧೧ ಲಕ್ಷ ಕುಟುಂಬಗಳಿಗೆ ಹಕ್ಕುಪತ್ರ ವಿತರಣೆ, ವಿವಿಧ ಸವಲತ್ತುಗಳ ವಿತರಣಾ ಕಾರ್ಯಕ್ರಮ ಹಮ್ಮಿಕೊಳ್ಳುವ ಮೂಲಕ ರಾಜ್ಯ ಸರ್ಕಾರ ಮಾಡಿರುವ ಕೆಲಸವನ್ನು ಜನರಿಗೆ ಸಮರ್ಪಣೆ ಮಾಡಲಾಗುವುದು ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಹೇಳಿದರು.

<><*<><>*><>

ಮಾಜಿ ಅಬಕಾರಿ ಸಚಿವ ಕೆ. ಗೋಪಾಲಯ್ಯ ಮತ್ತು ಇತರ ಅಧಿಕಾರಿಗಳು ಒಳಗೊಂಡ ಪ್ರಕರಣದಲ್ಲಿ ಲೋಕಾಯುಕ್ತ ಪೊಲೀಸರು ಸಲ್ಲಿಸಿದ ಮುಕ್ತಾಯ ವರದಿಯನ್ನು ಹಾಲಿ ಮತ್ತು ಮಾಜಿ ಸಂಸದರು/ಶಾಸಕರ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ವಿಚಾರಣೆ ನಡೆಸುವ ವಿಶೇಷ ನ್ಯಾಯಾಲಯವು ರದ್ದುಗೊಳಿಸಿದೆ.

ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಅಬಕಾರಿ ಸಚಿವರಾಗಿದ್ದ ಅವಧಿಯಲ್ಲಿ ೨ ಲಕ್ಷ ಮೆಟ್ರಿಕ್ ಟನ್‌ನಷ್ಟು ಕಾಕಂಬಿಯನ್ನು ನಿಯಮಬಾಹಿರವಾಗಿ ರಫ್ತು ಮಾಡಲು ಅನುಮತಿ ನೀಡಿದ್ದ ಪ್ರಕರಣದಲ್ಲಿ ಲೋಕಾಯುಕ್ತ ಪೊಲೀಸರು ಸಲ್ಲಿಸಿದ್ದ ಮುಕ್ತಾಯ ವರದಿಯನ್ನು ಜನಪ್ರತಿನಿಧಿಗಳ

ವಿಶೇಷ ನ್ಯಾಯಾಲಯವು ತಿರಸ್ಕರಿಸಿದೆ. ೨೦೨೧ ರಿಂದ ೨೦೨೩ ರವರೆಗೆ ಕೆಎನ್ ರಿಸೋರ್ಸಸ್ ಪ್ರೈವೇಟ್ ಲಿಮಿಟೆಡ್‌ಗೆ ೨ ಲಕ್ಷ ಮೆಟ್ರಿಕ್ ಟನ್ ಕಾಕಂಬಿ ರಫ್ತು ಮಾಡಲು ಅನುಮತಿ ನೀಡುವಾಗ ನಿಯಮ ಉಲ್ಲಂಘನೆ ಮಾಡಿದ್ದಾರೆ ಎಂದು ಆರೋಪಿಸಲಾಗಿತ್ತು.

ಲೋಕಾಯುಕ್ತ ಪೊಲೀಸರು ನ್ಯಾಯಾಲಯಕ್ಕೆ ಸಲ್ಲಿಸಿದ್ದ ವರದಿಯನ್ನು ಬದಿಗೆ ಸರಿಸಿರುವ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ನ್ಯಾಯಾಧೀಶ ಸಂತೋಷ್ ಗಜಾನನ ಭಟ್ ಅವರು ಈ ಪ್ರಕರಣವನ್ನು ಕಾನೂನುಬದ್ಧವಾಗಿ ತನಿಖೆ ನಡೆಸಿ ೩ ತಿಂಗಳ ಒಳಗೇ ವರದಿ ಸಲ್ಲಿಸಬೇಕು ಎಂದು ಲೋಕಾಯುಕ್ತ ಪೊಲೀಸರಿಗೆ ನಿರ್ದೇಶನ ನೀಡಿದ್ದಾರೆ.

<><*<><>*><>

ಕದನವಿರಾಮ ಘೋಷಿಸಿದ್ದರೆ ಅದು ಶಾಶ್ವತ ಅಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಅವರೇ ಸ್ಪಷ್ಟಪಡಿಸಿದ್ದಾರೆ. ಇದನ್ನು ಕಾಂಗ್ರೆಸ್ಸಿನವರು ಅರ್ಥ ಮಾಡಿಕೊಳ್ಳಲಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಹೇಳಿದ್ದಾರೆ.

ಶಿವಮೊಗ್ಗ ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ ಇಂದು ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ಸಚಿವ ಪ್ರಿಯಾಂಕ್ ಖರ್ಗೆ, ಕಾಂಗ್ರೆಸ್ಸಿನ ಇತರ ಮುಖಂಡರು ಆಪರೇಷನ್ ಸಿಂದೂರ ಕದನವಿರಾಮದ ಬಳಿಕ ಸ್ವಲ್ಪ ಹಗುರವಾಗಿ ಮಾತನಾಡಿದ್ದಾರೆ. ಪ್ರಿಯಾಂಕ್ ಖರ್ಗೆಯವರು ಪ್ರಧಾನಿ ನರೇಂದ್ರ ಮೋದಿ ಅವರು ಅಮೆರಿಕ ಅಧ್ಯಕ್ಷ ಟ್ರಂಪ್‌ಗೆ ಶರಣಾಗಿದ್ದಾರೆ ಎಂಬಂತೆ ಟೀಕಿಸಿದ್ದಾರೆ ಎಂದು ಆಕ್ಷೇಪಿಸಿದರು.

ಆಪರೇಷನ್ ಸಿಂದೂರದ ಬಳಿಕ ರಾಷ್ಟ್ರೀಯ ಅಧ್ಯಕ್ಷ ಜೆಪಿ.ನಡ್ಡಾ ಅವರು ದೇಶದ ಎಲ್ಲ ರಾಜ್ಯಗಳಲ್ಲಿ ತಿರಂಗಾ ಯಾತ್ರೆ ನಡೆಸಬೇಕು ಎಂದು ಕರೆ ನೀಡಿದ್ದಾರೆ. 'ರಾಷ್ಟ್ರ ರಕ್ಷಣೆಗಾಗಿ ನಾಗರಿಕರು' ಅಡಿಯಲ್ಲಿ ಆಪರೇಷನ್ ಸಿಂದೂರದ ಜೊತೆ ನಾವಿದ್ದೇವೆ; ಭಾರತದ ಸೇನೆ ಜೊತೆ ನಾವೆಲ್ಲರೂ ಇದ್ದೇವೆ ಎಂದು ಸಂದೇಶ ನೀಡಬೇಕು ಎಂದಿದ್ದು, ಕರ್ನಾಟಕದಲ್ಲೂ ತಿರಂಗಾ ಯಾತ್ರೆ ನಡೆಯಲಿದೆ ಎಂದು ಬಿ ವೈ ವಿಜಯೇಂದ್ರ ತಿಳಿಸಿದ್ದಾರೆ.

ಮೇ ೧೫ರಂದು ಬೆಂಗಳೂರು ಮಂಗಳೂರು, ಬೆಳಗಾವಿ ಮತ್ತಿತರ ಪ್ರಮುಖ ಜಿಲ್ಲೆಗಳಲ್ಲಿ ಕಾರ್ಯಕ್ರಮ ನಡೆಸಲಾಗುವುದು. ಮೇ ೧೬ರಂದು ಶಿವಮೊಗ್ಗ ಮತ್ತಿತರ ಜಿಲ್ಲಾ ಕೇಂದ್ರಗಳಲ್ಲಿ ಆಯೋಜಿಸಲಾಗುವುದು ಎಂದು ಅವರು ತಿಳಿಸಿದರು.

<><*<><>*><>

ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಅಂತರ ವಲಯ ಯುವಜನೋತ್ಸವದ ಉದ್ಘಾಟನಾ ಸಮಾರಂಭವನ್ನು ದೀಪ ಬೆಳಗಿಸುವ ಮೂಲಕ ರಂಗ ಕಲಾವಿದ ಡಾ. ಶಶಿಧರ ಉದ್ಘಾಟಿಸಿದರು.

<><*<><>*><>

೨೬ ಭಾರತೀಯರನ್ನು ಅಮಾನುಷವಾಗಿ ಕೊಂದ ಉಗ್ರಗಾಮಿಗಳ ವಿಚಾರವಾಗಿ ಪಾಕಿಸ್ತಾನಕ್ಕೆ ಆಪರೇಷನ್ ಸಿಂಧೂರ ಹೆಸರಿನಲ್ಲಿ ತಕ್ಕಪಾಠ ಕಲಿಸುವಲ್ಲಿ ಭಾರತೀಯ ಸೈನಿಕರು ಯಶಸ್ವಿಯಾಗಿದ್ದಾರೆ ಎಂದು ಚಿಕ್ಕಬಳ್ಳಾಪುರ ಜಿಲ್ಲೆ ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರದ ಶಾಸಕ ಬಿ.ಎನ್.ರವಿಕುಮಾರ್ ತಿಳಿಸಿದ್ದಾರೆ.

<><*<><>*><>

ಅರಣ್ಯ ಉಳಿದರಷ್ಟೇ ಮಾನವ ಉಳಿಯಲು ಸಾಧ್ಯ ಎಂದು ಪ್ರತಿಪಾದಿಸಿದ ಈಶ್ವರ ಖಂಡ್ರೆ, ಕಾಡಿದ್ದರೆ ಮಳೆ ಆಗುತ್ತದೆ, ಕಾಡಿದ್ದರೆ ಹಸಿರು ಹೊದಿಕೆ ಹೆಚ್ಚುತ್ತದೆ, ಈ ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ಬದಲಾವಣೆಯ ಕಾಲಘಟ್ಟದಲ್ಲಿ ಸುಂದರ ಬದುಕಿಗೆ ಸೋಪಾನವಾಗುತ್ತದೆ.

ನಮ್ಮ ಪೂರ್ವಿಕರು ಬೆಟ್ಟ, ಗುಡ್ಡಗಳ ಮೇಲೆ ದೇವಾಲಯ ನಿರ್ಮಿಸುವ ಮೂಲಕ ಪ್ರಕೃತಿ ಪರಿಸರ ಉಳಿಸಿದ್ದಾರೆ. ಬೆಟ್ಟದ ಮೇಲೆ ದೇವಾಲಯ ಇರುವ ಕಾರಣ ಆ ಗುಡ್ಡಗಳನ್ನು, ಬೆಟ್ಟಗಳನ್ನು ಯಾರೂ ನಾಶ ಮಾಡಿಲ್ಲ. ನಮ್ಮ ಪೂರ್ವಿಕರ ದೂರದರ್ಶಿತ್ವ ಅಮೂಲ್ಯವಾದುದ್ದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ಸರ್ವರಿಗೂ ಸಮಪಾಲು, ಸಮಸಮಾಜದ ಕಲ್ಪನೆಯನ್ನು ಬಸವಾದಿ ಶರಣರು ೧೨ನೇ ಶತಮಾನದಲ್ಲೇ ಪ್ರತಿಪಾದಿಸಿದರು, ಸಾಮಾಜಿಕ ಬದಲಾವಣೆಗೆ ಅವರು ನೀಡಿದ ಕೊಡುಗೆ ಅನುಪಮವಾದದ್ದು ಎಂದ ಅವರು ಆಧುನಿಕ ಕರ್ನಾಟಕದ ಪ್ರಗತಿಗೆ ವೀರಶೈವ ಲಿಂಗಾಯತ ಮಠಗಳು ಸರ್ವರಿಗೂ ಆಶ್ರಯ, ಅನ್ನ, ಅಕ್ಷರವೆಂಬ ತ್ರಿವಿಧ ದಾಸೋಹ ಮಾಡುತ್ತಿದ್ದು, ಶಿಕ್ಷಣ, ಆರೋಗ್ಯ ಕ್ಷೇತ್ರಕ್ಕೆ ದೊಡ್ಡ ಕೊಡುಗೆ ನೀಡಿವೆ ಎಂದರು.

ಕಾರ್ಯಕ್ರಮದಲ್ಲಿ ಸಂಸತ್ ಸದಸ್ಯ ಶ್ರೇಯಸ್ ಪಟೇಲ್, ಶಾಸಕ ಎಚ್.ಕೆ. ಸುರೇಶ್, ಮಾಜಿ ಶಾಸಕ ಲಿಂಗೇಶ್, ಕೆರಗೋಡಿ ರಂಗಾಪುರದ ಶ್ರೀ ಗುರುಪರದೇಶಿಕೇಂದ್ರ ಮಹಾಸ್ವಾಮೀಜಿ, ಪುಷ್ಪಗಿರಿ ಮಹಾ ಸಂಸ್ಥಾನ, ಹಳೇಬೀಡಿನ ಶ್ರೀ ಸೋಮಶೇಖರ ಶಿವಾಚಾರ್ಯ ಮಹಾಸ್ವಾಮೀಜಿ ಮೊದಲಾದವರು ಭಾಗವಹಿಸಿದ್ದರು.

<><*<><>*><>

ತೀವ್ರ ಬೇಸಿಗೆ ಕಾಲದಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಅವಶ್ಯಕ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಯಾದಗಿರಿ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ಅವರು ಸೂಚಿಸಿದರು.

ಯಾದಗಿರಿ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಪ್ರಕೃತಿ ವಿಕೋಪ ನಿರ್ವಹಣಾ ಸಮಿತಿ ಸಭೆ ನಡೆಸಿ ಮಾತನಾಡಿದ ಅವರು, ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿರುವ ಸಮಸ್ಯಾತ್ಮಕ ಗ್ರಾಮಗಳಿಗೆ ತಕ್ಷಣ ಶುದ್ಧ ನೀರು ಪೂರೈಕೆ ಗೆ ಕ್ರಮ ಕೈಗೊಳ್ಳಬೇಕು. ಸಣ್ಣ-ಪುಟ್ಟ ದುರಸ್ತಿ ಕಾರ್ಯಗಳನ್ನು ಕೈಗೊಂಡು ನೀರು ಪೂರೈಸಬೇಕು. ಕುಡಿಯುವ ನೀರಿನ ಕುರಿತು ದೂರು ಬಂದ ಕಡೆ ತಕ್ಷಣ ಸ್ಪಂದಿಸಲು ಸೂಚಿಸಿದರು.

<><*<><>*><>

ಕನ್ನಡ ಪುಸ್ತಕ ಪ್ರಾಧಿಕಾರ ೨೦೨೫ರ ಬೂಕರ್ ಪ್ರಶಸ್ತಿಗೆ ನಾಮ ನಿರ್ದೇಶನಗೊಂಡಿರುವ ಬಾನುಮುಷ್ತಾಕ್ ಅವರ ಹಸೀನಾ ಮತ್ತು ಇತರ ಕಥೆಗಳು ಕೃತಿ ಕುರಿತ ಕಾರ್ಯಕ್ರಮ ಇದೇ ತಿಂಗಳ ೧೫ ರಂದು ಹಮ್ಮಿಕೊಂಡಿದೆ.

ಕನ್ನಡ ಪುಸ್ತಕ ಪ್ರಾಧಿಕಾರವು "ಅಂಗಳದಲ್ಲಿ ತಿಂಗಳ ಪುಸ್ತಕ" ಯೋಜನೆಯಡಿ ೨೦೨೫ರ ಬೂಕರ್ ಪ್ರಶಸ್ತಿಗೆ ನಾಮನಿರ್ದೇಶನಗೊಂಡಿರುವ ಬಾನು ಮುಷ್ತಾಕ್ ಅವರ "ಹಸೀನಾ ಮತ್ತು ಇತರ ಕಥೆಗಳು" ಕೃತಿ ಕುರಿತು ಕಾರ್ಯಕ್ರಮ ಏರ್ಪಡಿಸಿದ್ದು, ಹಿರಿಯ ಲೇಖಕಿ ಹಾಗೂ ಕರ್ನಾಟಕ ಲೇಖಕಿಯರ ಸಂಘದ ಅಧ್ಯಕ್ಷೆ ಡಾ. ಹೆಚ್.ಎಲ್. ಪುಷ್ಪಾ ಅವರು ಈ ಕೃತಿಯನ್ನು ಕುರಿತು ಮಾತನಾಡಲಿದ್ದಾರೆ ಜಯನಗರದ ಜೈನ್ (ಡೀಮ್ಡ್-ಟು-ಬಿ-ಯೂನಿವರ್ಸಿಟಿ)ಯ, ಆವರಣದಲ್ಲಿ ಕಾರ್ಯಕ್ರಮ ನಡೆಯಲಿದೆ.

<><*<><>*><>

ರಾಷ್ಟ್ರೀಯ ತುರ್ತು ಪರಿಸ್ಥಿತಿ ಸಂದರ್ಭದಲ್ಲಿ ಜನರನ್ನು ಜಾಗೃತಗೊಳಿಸುವ ಉದ್ದೇಶದಿಂದ ದಾವಣಗೆರೆ ಜಿಲ್ಲೆಯ ಎಲ್ಲ ನಗರ ಸ್ಥಳಿಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸೈರನ್‌ಗಳನ್ನು ಅಳವಡಿಸಿಕೊಳ್ಳಬೇಕೆಂದು ಸೂಚಿಸಿರುವುದಾಗಿ ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ ಹೇಳಿದರು.

ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಮಾತನಾಡಿದ ಅವರು, ಯಾವುದೇ ಪರಿಸ್ಥಿತಿ ನಿಭಾಯಿಸಲು ಮತ್ತು ಸಂವಹನಕ್ಕಾಗಿ ಸೈರನ್ ಅಗತ್ಯವಿದೆ. ಪ್ರಕೃತಿ ವಿಕೋಪದ ಸಂದರ್ಭದಲ್ಲಿಯೂ ಇದನ್ನು ಬಳಸಿಕೊಳ್ಳಬಹುದಾಗಿದೆ ಎಂದರು.

ಪ್ರತಿ ೫೦ ಕಿಲೋಮೀಟರ್‌ಗೆ ಒಂದು ಸೈರನ್ ಇರುವಂತೆ ನೋಡಿಕೊಳ್ಳಬೇಕು. ದಾವಣಗೆರೆ ಮಹಾನಗರ ಪಾಲಿಕೆ ವ್ಯಾಪ್ತಿಯ ೩ ಸ್ಥಳಗಳಲ್ಲಿ ಸೈರನ್ ಅಳವಡಿಸಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಸುರೇಶ್ ಇಟ್ನಾಳ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾಪ್ರಶಾಂತ್ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

<><*<><>*><>

ಜೂನ್ ೩೦ರೊಳಗೆ ತೆರಿಗೆ ಪಾವತಿಸುವವರಿಗೆ ತೆರಿಗೆಯಲ್ಲಿ ಶೇಕಡ ೫ರಷ್ಟು ವಿನಾಯತಿ ಸರ್ಕಾರ ನೀಡಿದೆ. ಈ ಕುರಿತಂತೆ ಯಾದಗಿರಿ ನಗರಸಭೆಯಲ್ಲಿ ನಗರಸಭೆ ಅಧ್ಯಕ್ಷೆ ಲಲಿತಾ ಅನಪುರ, ಪೌರಾಯುಕ್ತ ಉಮೇಶ ಚವಾಣ್ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಇದಕ್ಕಾಗಿ ಸಿಬ್ಬಂದಿಗಳ ತಂಡಗಳು, ಕಾಲಾವಧಿ ನಿಗದಿ ಮತ್ತು ಕಚೇರಿಯಲ್ಲಿ ಹೆಲ್ಪ್ ಲೈನ್ ವಿಭಾಗ ಸ್ಥಾಪಿಸಲಾಗಿದೆ.

ಆಸ್ತಿ, ನೀರಿನ ತೆರಿಗೆ ವಸೂಲಿ ಸೇರಿದಂತೆಯೇ ಸಾರ್ವಜನಿಕರ ವಿವಿಧ ಕೆಲಸ ಕಾರ್ಯಗಳಿಗೆ ಚುರುಕು ಮುಟ್ಟಿಸುವ ನಿಟ್ಟಿನಲ್ಲಿ ನಗರಸಭೆ ದಿಟ್ಟ ಹೆಜ್ಜೆ ಇಟ್ಟಿದ್ದು, ೨೦೨೫-೨೬ ನೇ ಸಾಲಿನ ಆಸ್ತಿ ತೆರಿಗೆ, ನೀರಿನ ಕರ, ಬಿ ಖಾತಾ ಅಭಿಯಾನ ಮತ್ತು ಆಸ್ತಿಗಳನ್ನು ಡಿಜಿಟಲೀಕರಣ ಮಾಡಿಕೊಳ್ಳುವುದು ಸೇರಿದಂತೆಯೇ ನಗರದ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವ ನಿಟ್ಟಿನಲ್ಲಿ ಮಾರ್ಗಸೂಚಿ ಮತ್ತು ಕೆಲಸದ ನಿರ್ವಹಣೆಗಾಗಿ ನಗರಸಭೆ ಕೆಲವು ಕಟ್ಟುನಿಟ್ಟಿನ ಕ್ರಮಗಳನ್ನು ಹಾಕಿಕೊಂಡಿದೆ.

ಸರ್ಕಾರ ನೀಡಿರುವ ಈ ಕಾಲಾವಕಾಶ ತಪ್ಪಿಸಿಕೊಳ್ಳದೇ ನಗರಸಭೆಗೆ ಆಸ್ತಿ, ನೀರಿನ ತೆರಿಗೆ ಪಾವತಿಸಬೇಕು. ಆಸ್ತಿಗಳನ್ನು ಡಿಟಿಲೀಕರಣ ಮಾಡಿಕೊಳ್ಳಬೇಕು. ಬಿ ಖಾತೆ ಮಾಡಿಸಿಕೊಳ್ಳವಲ್ಲಿ ಇರುವ ಅಡೆತಡೆಗಳನ್ನು ನಿವಾರಿಸಿಕೊಳ್ಳಬಹುದು ಎಂದು ವಿವರಿಸಿದ್ದಾರೆ.

ಆಸ್ತಿ ತೆರಿಗೆ ವಸೂಲಿ ಸೇರಿದಂತೆ ವಿವಿಧ ಕೆಲಸಗಳಿಗಾಗಿ ನಾಲ್ಕು ತಂಡಗಳನ್ನು ರಚಿಸಲಾಗಿದೆ.**<><*<><>*><>**